# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ | : | 1399 |
| ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತುಸಾಂಖ್ಯಿಕ ಸಚಿವರು. |
| ಉತ್ತರಿಸುವ ದಿನಾಂಕ | : | 30.12.2022 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಅಕಾಲಿಕವಾಗಿ ಸುರಿಯುತ್ತಿರುವ ಮಳೆಯಿಂದಾಗಿ ಅಡಿಕೆ ಫಸಲು ನಷ್ಟದ ಜೊತೆಗೆ ಗುಣಮಟ್ಟ ಕುಸಿಯುವ ಭೀತಿಯಿಂದ ಅಡಿಕೆ ಬೆಳೆಗಾರರು ಆತಂಕಕ್ಕೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿದೆ. |
| ಆ) | ಬಂದಿದ್ದಲ್ಲಿ ರಾಜ್ಯದಲ್ಲಿ ಅಕಾಲಿಕ ಮಳೆಯಿಂದಾಗಿ ಸಂಕಷ್ಟಕ್ಕೀಡಾಗಿರುವ ಅಡಿಕೆ ಬೆಳೆಗಾರರಿಗೆ ಯಾವ ರೀತಿಯಲ್ಲಿ ನೆರವು ಮತ್ತು ಸಹಾಯ ಒದಗಿಸಲಿದೆ: | ಅಡಿಕೆ ಬೆಳೆಗಾರರಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳು ಈ ಕೆಳಗಿನಂತಿವೆ.<br>1. ವೈಜ್ಞಾನಿಕ ಬೇಸಾಯ ಪದ್ಧತಿಗಳು / ಹೊಸ ತಂತ್ರಜ್ಞಾನ ತಾಂತ್ರಿಕ ಮಾಹಿತಿ ಮುಖಾಂತರ ರೋಗದ ನಿಯಂತ್ರಣದ ಕುರಿತಾಗಿ ರೈತರಲ್ಲಿ ಅರಿವು ಮೂಡಿಸಲು ತರಬೇತಿ/ ಕಾರ್ಯಗಾರಗಳನ್ನುಹಮ್ಮಿಕೊಳ್ಳಲಾಗುತ್ತಿದೆ.<br>2. ಅಡಿಕೆ ಹಳದಿ ಎಲೆ ರೋಗ ಬಾಧಿತ ಪ್ರದೇಶಗಳಲ್ಲಿ ಅಡಿಕೆ ಬೆಳೆಯ ಬದಲಾಗಿ ಇತರೆ ವಾಣಿಜ್ಯ ಬೆಳೆಗಳನ್ನು ಬೆಳೆಯಲು ಪ್ರೋತ್ಸಾಹಿಸಲಾಗುತ್ತಿದೆ. ಅಡಿಕೆ ಬೆಳೆಗಾರರು ಇತರೆ ಬೆಳೆಗಳಾದ ಬಾಳೆ, ತೆಂಗು, ಕಾಫಿ, ಕೋಕೋ, ಕಾಳುಮೆಣಸು, ಜಾಯಿ ಕಾಯಿ, ಬೆಣ್ಣೆಹಣ್ಣು ಹಾಗೂ ಇತರೆ ಬೆಳೆಗಳನ್ನು ಬೆಳೆಯಲು ಪ್ರೋತ್ಸಾಯಿಸಲಾಗುತ್ತಿದೆ.<br>3. ಸಂಶೋಧನೆಗೆ ಒತ್ತು ನೀಡಲು CPCRI (Central plantation crops research Institute) ಕಾಸರಗೋಡು ಹಾಗೂ UAHS (University of Agricultural and Horticultural and Sciences) ಶಿವಮೊಗ್ಗ ರವರೊಡನೆ ಸಹಯೋಗದೊಂದಿಗೆ |

| | | |
|---|---|---|
| | | ಕಾರ್ಯಕ್ರಮ ರೂಪಿಸಲಾಗುತ್ತಿದೆ. |
| ಇ) | ಆರ್ಥಿಕವಾಗಿ ಸಂಕಷ್ಟಕ್ಕೀಡಾಗಿರುವ ಅಡಿಕೆ ಬೆಳೆಗಾರರಿಗೆ ಸರ್ಕಾರ ನೀಡಲಿರುವ ತತಕ್ಷಣದ ಪರಿಹಾರದ ವಿವರಗಳೇನು? | ಸರ್ಕಾರ ಆರ್ಥಿಕವಾಗಿ ಕೈಗೊಂಡಿರುವ ಕ್ರಮಗಳು ಈ ಕೆಳಗಿನಂತಿವೆ.<br>1. ಅಡಿಕೆ ಎಲೆ ಚುಕ್ಕೆ ರೋಗದ ನಿಯಂತ್ರಣಕ್ಕೆ ಪ್ರತಿ ಹೆಕ್ಟೇರ್‌ಗೆ ರೂ.4000 ರಂತೆ ಮೊದಲನೆ ಸಿಂಪರಣೆಗೆ ಸಸ್ಯ ಸಂರಕ್ಷಣಾ ಔಷಧಿಗಳನ್ನು ಉಚಿತವಾಗಿ ವಿತರಿಸಲಾಗಿರುತ್ತದೆ.<br>2. ಅಡಿಕೆ ಹಳದಿ ರೋಗದ ನಿಯಂತ್ರಣಕ್ಕೆ ಅಡಿಕೆ ಬೆಳೆಗಾರರಿಗೆ 0.2 ಹೆ. ನಿಂದ 4 ಹೆ. ವರೆಗೆ ಪರ್ಯಾಯ ಬೆಳೆ ಉತ್ತೇಜಿಸಲು ಪ್ರತಿ ಹೆಕ್ಟೇರ್‌ಗೆ ರೂ.15000 ಗಳ ಸಹಾಯಧನ ನೀಡಲಾಗುತ್ತಿದೆ.<br>3. NDRF/ SDRF ಮಾರ್ಗಸೂಚಿಯಂತೆ ಪ್ರತಿ ಹೆಕ್ಟೇರ್ ನಷ್ಟಕ್ಕೆ ರೂ. 18000 ಹಾಗೂ ರಾಜ್ಯ ಸರ್ಕಾರದ ಹೆಚ್ಚುವರಿ ಪರಿಹಾರದನ್ವಯ ರೂ. 10000 ಗಳನ್ನೊಳಗೊಂಡು ಒಟ್ಟು 28000 ರೂಗಳ ಪರಿಹಾರದ ಮೊತ್ತ ಅಡಿಕೆ ಬೆಳೆಗಾರರ ಖಾತೆಗೆ ನೇರವಾಗಿ DBT ಮೂಲಕ ಕಂದಾಯ ಇಲಾಖೆಯಿಂದ ನೀಡಲಾಗುತ್ತಿದೆ. |

**ಸಂಖ್ಯೆ: HORTI 630 HGM 2022**

(ಮುನಿರತ್ನ)
**ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು**